ಕರ್ನಾಟಕ ಸರ್ಕಾರ

ಸಂಖ್ಯೆ:ಮಮಅಇ/ಮಕ/07/2011-12

ನಿರ್ದೇಶಕರ ಕಛೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
1ನೇ ಮಹಡಿ, ಬಹುಮಹಡಿ ಕಟ್ಟಡ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-1,
ದಿನಾಂಕ: 08-03-2013

ಉಪನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
30 ಜಿಲ್ಲೆಗಳು,

ಮಾನ್ಯರೇ,

ವಿಷಯ:- ಬಾಲ್ಯ ವಿವಾಹಗಳನ್ನು ತಡೆಗಟ್ಟುವ ಬಗ್ಗೆ.

-*-*-*-*-

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ವಿಷಯಗಳ ಬಗ್ಗೆ ಆದ್ಯತೆ ಮೇರೆಗೆ ಕ್ರಮ ಕೈಗೊಳ್ಳಲು ತಿಳಿಸಿದೆ.

1. ಇದು ಮದುವೆಗಳು ಹೆಚ್ಚಾಗಿ ನಡೆಯುವ ಸಮಯವಾಗಿದ್ದು, ಈ ಸಮಯದಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ತಡೆಯುವುದು ಹಾಗೂ ಅರಿವು ಮೂಡಿಸುವುದು ಹೆಚ್ಚು ಅಗತ್ಯವಾಗಿರುತ್ತದೆ. ಆದ್ದರಿಂದ ದೇವಸ್ಥಾನಗಳ ಪುರೋಹಿತರು, ಕಲ್ಯಾಣ ಮಂಟಪಗಳ ಮಾಲೀಕರು, ಮದುವೆಗಳು ನಡೆಯುವ ಇತರೆ ಸ್ಥಳಗಳ ಮಾಲೀಕರು ಮತ್ತು ಸಾಮೂಹಿಕ ವಿವಾಹಗಳ ಆಯೋಜಕರಿಗೆ ಬಾಲ್ಯ ವಿವಾಹ ನಿಷೇಧದ ಕುರಿತು ಮಾಹಿತಿ ನೀಡುವುದು. ಆಯಾ ವ್ಯಾಪ್ತಿಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ನಿರ್ದೇಶನ ನೀಡುವ ಮುಖಾಂತರ ಬಾಲ್ಯ ವಿವಾಹ ತಡೆಗಟ್ಟಲು ಕ್ರಮ ವಹಿಸುವುದು.
2. ಬಾಲ್ಯ ವಿವಾಹಗಳನ್ನು ನಡೆಯುತ್ತಿರುವ ಬಗ್ಗೆ ದೂರು ಬಂದಂತಹ ಸಂದರ್ಭದಲ್ಲಿ ತಾವು ಈ ಬಗ್ಗೆ ಕ್ರಮ ವಹಿಸದೇ ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿಗಳಿಗೆ ಬಾಲ್ಯ ವಿವಾಹಗಳನ್ನು ತಡೆಯಲು ತಿಳಿಸುತ್ತಿರುವುದು ಮತ್ತು ಎಲ್ಲಾ ಜವಾಬ್ದಾರಿಯನ್ನು ಅವರ ಮೇಲೆ ಹೇರುತ್ತಿರುವುದಾಗಿ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಹಕಾರ ನೀಡುತ್ತಿಲ್ಲವೆಂಬ ಬಗ್ಗೆ ಮಾಹಿತಿಗಳು ಪದೇ ಪದೇ ಬರುತ್ತಿವೆ. ಈ ರೀತಿ ಬಾಲ್ಯ ವಿವಾಹಗಳನ್ನು ತಡೆಯುವ ಸಂಪೂರ್ಣ ಜವಾಬ್ದಾರಿಯನ್ನು ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿಗಳ ಮೇಲೆಯೇ ನೀಡದೇ ಅಗತ್ಯವಿದ್ದ ಸಂದರ್ಭದಲ್ಲಿ ಮಾತ್ರ ಅವರ ಸಹಾಯವನ್ನು ಪಡೆದುಕೊಳ್ಳುವುದು. ಮತ್ತು ಬಾಲ್ಯ ವಿವಾಹ ಪ್ರಕರಣದಲ್ಲಿ ಪುನರ್ವಸತಿ ಅವಶ್ಯವಿರುವುವವರಿಗೆ ಸಹಾಯ ನೀಡುವ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿಗಳ ಸಹಾಯ ಪಡೆದುಕೊಳ್ಳುವುದು. ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ವಹಿಸುವುದು. ಹಾಗೂಗೂ ಇದು ಪುನರಾವರ್ತನೆಯಾಗದಂತೆ ನೋಡಿಕೊಳ್ಳುವುದು.

ಕ್ರಮ ಸಂಖ್ಯೆ 1 ರ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ಕೇಂದ್ರ ಕಚೇರಿಗೆ ವರದಿ ಮಾಡುವುದು.

ತಮ್ಮ ವಿಶ್ವಾಸಿ,

ರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ

ನಿರ್ದೇಶಕರ ಪರವಾಗಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು